**ಅಸಲು ದಾವಾ ನಂಃ115/2016**
**ಪಿ.ಡಬ್ಲ್ಯೂಃ 02**

**ದಿನಾಂಕಃ 27-07-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲು: ಶ್ರೀ ಜಿ ಆರ್ 1 ನೇ ಪ್ರತಿವಾದಿ ಪರ ವಕೀಲರಿಂದ**

ವಾದಿ ಹುಸೇನ ಬಿ ನನಗೆ ಅತ್ತಿಗೆಯಾಗುತ್ತಾರೆ ಎಂದರೆ ಸರಿ. ನನ್ನ ಅಣ್ಣ ವಲಿಪೀರ್ ರವರ ಪತ್ನಿಯಾಗಿರುತ್ತಾರೆ. ದಾವಾ ಅನುಸೂಚಿ ಸ್ವತ್ತನ್ನು ಖರೀದಿ ಮಾಡುವ ಕಾಲಕ್ಕೆ ನನಗೆ ಗೊತ್ತು. ಸದರಿ ಖರೀದಿ ಕಾಲಕ್ಕೆ ನಾನು ಹಾಜರು ಇರಲಿಲ್ಲ. ಸದರಿ ಖರೀದಿಯಲ್ಲಿ ಯಾರು ಎಷ್ಟು ಜಮೀನನ್ನು ಖರೀದಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿ ಲೋಕೇಶರವರ ಜಮೀನು ಚಿತ್ರದುರ್ಗ ಗಡಿಯ ಸರಹದ್ದಿನಲ್ಲಿ ಬರುತ್ತದೆ ಎಂದರೆ ನನಗೆ ಗೊತ್ತಿಲ್ಲ.

ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ತಿಳಿಸಿರುವಂತೆ ದಾವಾ ಅನುಸೂಚಿ ಸ್ವತ್ತು 8 ಎಕರೆ 32 ಗುಂಟೆ ಇರಬಹುದು ಎಂದು ಉತ್ತರಿಸುತ್ತಾರೆ. ಸದರಿ ದಾವಾ ಅನುಸೂಚಿ ಸ್ವತ್ತನ್ನು ಸಿದ್ದಮ್ಮ ಮತ್ತು ವೃಷಬೇಂದ್ರಪ್ಪರವರಿಂದ ಖರೀದಿ ಮಾಡಿರುತ್ತಾರೆ. ಸದರಿ ವೃಷಬೇಂದ್ರಪ್ಪರವರಿಗೆ ಒಟ್ಟು ಎಷ್ಟು ಜಮೀನು ಇತ್ತು ಎಂದು ನನಗೆ ಗೊತ್ತಿಲ್ಲ. ವಾದಿ ಹುಸೇನ ಬಿ ರವರು ದಾವಾ ಅನುಸೂಚಿ ಸ್ವತ್ತನ್ನು ಅಳತೆ ಮಾಡಿ ಖರೀದಿಸಿದ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಅನುಸೂಚಿ ಸ್ವತ್ತಿನ ಪೂರ್ವಕ್ಕೆ ತಿಪ್ಪಯ್ಯನ ಜಮೀನು, ಪಶ್ಚಿಮಕ್ಕೆ ಜೋಗಪ್ಪನ ಜಮೀನು, ಉತ್ತರಕ್ಕೆ ಕಮಲಮ್ಮನ ಜಮೀನು ಮತ್ತು ದಕ್ಷಿಣಕ್ಕೆ ಪ್ರತಿವಾದಿ ಲೋಕೇಶರವರ ಜಮೀನು ಇರುತ್ತದೆ. 1 ನೇ ಪ್ರತಿವಾದಿ ಲೋಕೇಶರವರ ಜಮೀನಿನ ಪಕ್ಕದಲ್ಲಿ ಹೊಂದಿಕೊಂಡು ವಾದಿ ಹುಸೇನ ಬಿ ಯವರ ಜಮೀನು ಇದೆ ಎಂದರೆ ಸರಿ.

**(ಮುಂದುವರೆದ ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದು, ಸದರಿ ಕೋರಿಕೆಯನ್ನು ಅನುಮತಿಸಲಾಯಿತು ಮತ್ತು ಪಾಟೀ ಸವಾಲನ್ನು ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.